## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಹಿಂದುಳಿದ ವರ್ಗಗಳ ವಿದ್ಯಾರ್ಥಿನಿಲಯಗಳ ಪ್ರವೇಶಕ್ಕೆ ಸ್ವಂತ ಜಿಲ್ಲೆಯ ವಿದ್ಯಾರ್ಥಿಗಳಿಗೆ ಆದ್ಯತೆ ನೀಡುವ ಬಗ್ಗೆ.

ಓದಲಾಗಿದೆ:- 1. ಸರ್ಕಾರದ ಆದೇಶ ಸಂ:ಸಕಇ 190 ಬಿಎಂಎಸ್ 2001, ದಿನಾಂಕ:12.06.2001

2. ಸರ್ಕಾರದ ಆದೇಶ ಸಂ:ಸಕಇ 221 ಬಿಎಂಎಸ್ 2009, ದಿನಾಂಕ:24.07.2009

3. ಆಯುಕ್ತರು, ಹಿಂ.ವ.ಕ.ನಿ ಸುತ್ತೋಲೆ ಸಂಖ್ಯೆ:ಹಿಂವಕನಿ /ವನಿಶಾ-2/ಸಿಆರ್-40/2012-13 ದಿನಾಂಕ:13.08.2013

4. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು, ಇವರ ಪತ್ರ ಸಂಖ್ಯೆ:ಹಿಂವಕನಿ/ವನಿಶಾ-2/ಸಿಆರ್-94/2015-16. ದಿನಾಂಕ:24.08.2015.

******

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ:(1) (2) ಆದೇಶಗಳಲ್ಲಿ ಮತ್ತು (3)ರ ಸುತ್ತೋಲೆಯಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿ 1339 ಮೆಟ್ರಿಕ್-ಪೂರ್ವ, 969 ಮೆಟ್ರಿಕ್-ನಂತರ ಹೀಗೆ ಒಟ್ಟು 2308 ವಿದ್ಯಾರ್ಥಿನಿಲಯಗಳು ಕಾರ್ಯನಿರ್ವಹಿಸುತ್ತಿದ್ದು, 170392 ವಿದ್ಯಾರ್ಥಿಗಳಿಗೆ ಪ್ರವೇಶಾವಕಾಶ ಕಲ್ಪಿಸಲಾಗಿದೆ. ವಿದ್ಯಾರ್ಥಿನಿಲಯಗಳಿಗೆ ಪ್ರವೇಶ ಕೋರಿ ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳಿಗೆ ಇರಬೇಕಾದ ಅರ್ಹತೆ, ಆಯ್ಕೆ ವಿಧಾನ ಹಾಗೂ ಪ್ರವೇಶದ ವಿಧಾನಗಳ ಬಗ್ಗೆ ವಿವರಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ(4)ರ ಪ್ರಸ್ತಾವನೆಯಲ್ಲಿ ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು, ಇವರು ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಿದ ನಂತರ ಅರ್ಹತೆಯನ್ನು ಪರಿಶೀಲಿಸಿ, ಪ್ರವರ್ಗವಾರು ಮೀಸಲಿರಿಸಿರುವ ಸ್ಥಾನಗಳಿಗೆ ಅನುಗುಣವಾಗಿ ಆಯಾ ಪ್ರವರ್ಗಗಳಡಿಯಲ್ಲಿ ವಿದ್ಯಾರ್ಥಿಗಳು ಪಡೆದಿರುವ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುತ್ತದೆ. ಹೀಗೆ ಮಾಡುವಾಗ ವಿದ್ಯಾರ್ಥಿಗಳ ಅಂಕಗಳನ್ನೇ ಮಾನದಂಡವನ್ನಾಗಿ ಇಟ್ಟುಕೊಳ್ಳಲಾಗುತ್ತಿದೆ.

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಿದ್ಯಾರ್ಥಿನಿಲಯಗಳನ್ನು ಸಾಮಾನ್ಯವಾಗಿ ಸ್ಥಳೀಯ ಬೇಡಿಕೆಯನ್ನಾಧರಿಸಿ ಹಾಗೂ ಆ ಭಾಗದ ವಿದ್ಯಾರ್ಥಿಗಳ ಶೈಕ್ಷಣಿಕ ಉತ್ತೇಜನದ ದೃಷ್ಠಿಯಿಂದ ಮಂಜೂರು ಮಾಡಲಾಗುತ್ತಿದ್ದು, ಈ ರೀತಿ ಮಂಜೂರು ಮಾಡಲಾದ ವಿದ್ಯಾರ್ಥಿನಿಲಯಗಳಿಗೆ ರಾಜ್ಯದ ಯಾವುದೇ ಭಾಗದ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಬಹುದಾಗಿದ್ದು, ಅತೀ ಹೆಚ್ಚು ಅಂಕ ಪಡೆದಿದ್ದಲ್ಲಿ, ಅಂತಹ ವಿದ್ಯಾರ್ಥಿಗಳು, ವಿದ್ಯಾರ್ಥಿನಿಲಯಗಳಿಗೆ ಪ್ರವೇಶ ಪಡೆಯುತ್ತಾರೆ. ಇದರಿಂದಾಗಿ ಕಡಿಮೆ ಅಂಕ ಹೊಂದಿದ ಹಾಗೂ ಹಿಂದುಳಿದ ಸ್ಥಳೀಯ ವಿದ್ಯಾರ್ಥಿಗಳಿಗೆ ಪ್ರವೇಶ ಕಲ್ಪಿಸಲು ಸಾಧ್ಯವಾಗುತ್ತಿಲ್ಲವೆಂದು ವಿದ್ಯಾರ್ಥಿಗಳು / ಜನ ಪ್ರತಿನಿಧಿಗಳು ಗಮನಕ್ಕೆ ತಂದಿದ್ದು, ಈ ವಿಷಯದ ಬಗ್ಗೆ

.....2

" The number of applications received are 10 times more than seats. The higher merit students are from outside the District (eg., Bagalkot). The District students are lower in merit. Hence, lose chance, why should we not give first priority to local students. Rest can be taken up for Vidyasiri," ಎಂದು ತೀರ್ಮಾನಿಸಲಾಗಿದೆ.

C-2747
4/9/15
ಬೆಂಗಳೂರು

ಈ ಹಿನ್ನೆಲೆಯಲ್ಲಿ ರಾಜ್ಯದಲ್ಲಿರುವ ಹಿಂದುಳಿದ ವರ್ಗಗಳ ಮೆಟ್ರಿಕ್-ಪೂರ್ವ/ ಮೆಟ್ರಿಕ್-ನಂತರದ ವಿದ್ಯಾರ್ಥಿನಿಲಯಗಳಿಗೆ ಪ್ರವೇಶ ನೀಡುವಾಗ ಮೊದಲನೇ ಆದ್ಯತೆಯಲ್ಲಿ ಆಯಾ ಜಿಲ್ಲೆಯ ವಿದ್ಯಾರ್ಥಿಗಳಿಗೆ ದಿನಾಂಕ:12.06.2001 ಸರ್ಕಾರದ ಆದೇಶದ ಮೀಸಲಾತಿಯನ್ನು ಅನುಸರಿಸಿ ಪ್ರವೇಶ ನೀಡುವ ಅವಶ್ಯಕತೆಯಿರುತ್ತದೆ. ಈ ರೀತಿ ಪ್ರಥಮ ಆದ್ಯತೆಯಲ್ಲಿ ಆಯಾ ಜಿಲ್ಲೆಯ ಸ್ಥಳೀಯ ವಿದ್ಯಾರ್ಥಿಗಳಿಗೆ ಪ್ರವೇಶ ನೀಡಿದ ನಂತರ ಉಳಿಕೆಯಾಗುವ ಸ್ಥಾನಗಳಿಗೆ ಅಂಕಗಳು ಹಾಗೂ ಮೀಸಲಾತಿ ಆಧಾರದ ಮೇಲೆ ಬೇರೆ ಜಿಲ್ಲೆಯ ವಿದ್ಯಾರ್ಥಿಗಳಿಗೆ ಪ್ರವೇಶ ನೀಡಲು ಅನುಮತಿ ನೀಡಿ ಆದೇಶ ಹೊರಡಿಸುವಂತೆ ಕೋರಿ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಬಿಸಿಡಬ್ಲ್ಯು 1003 ಬಿಎಂಎಸ್ 2015, ಬೆಂಗಳೂರು, ದಿನಾಂಕ: 02-09-2015**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ರಾಜ್ಯದಲ್ಲಿರುವ ಹಿಂದುಳಿದ ವರ್ಗಗಳ ಮೆಟ್ರಿಕ್-ಪೂರ್ವ/ ಮೆಟ್ರಿಕ್-ನಂತರದ ವಿದ್ಯಾರ್ಥಿನಿಲಯಗಳಿಗೆ ಪ್ರವೇಶ ನೀಡುವಾಗ ಮೊದಲನೇ ಆದ್ಯತೆಯಲ್ಲಿ ಆಯಾ ಜಿಲ್ಲೆಯ ಸ್ಥಳೀಯ ವಿದ್ಯಾರ್ಥಿಗಳಿಗೆ ದಿನಾಂಕ:12.06.2001ರ ಸರ್ಕಾರದ ಆದೇಶದ ಮೀಸಲಾತಿಯನ್ನು ಅನುಸರಿಸಿ ಪ್ರವೇಶ ನೀಡಿದ ನಂತರ ಉಳಿಕೆಯಾಗುವ ಸ್ಥಾನಗಳಿಗೆ ಅಂಕಗಳು ಹಾಗೂ ಮೀಸಲಾತಿ ಆಧಾರದ ಮೇಲೆ ಬೇರೆ ಜಿಲ್ಲೆಯ ವಿದ್ಯಾರ್ಥಿಗಳಿಗೆ ಪ್ರವೇಶ ನೀಡಲು ಅನುಮತಿ ನೀಡಿ ಆದೇಶಿಸಿದೆ.

ಕರ್ನಾಟಕದ ರಾಜ್ಯಪಾಲರ ಆದೇಶಾನುಸಾರ,
ಮತ್ತು ಅವರ ಹೆಸರಿನಲ್ಲಿ
(ಆರ್.ಭಾಸ್ಕರ್)
ಸರ್ಕಾರದ ಅಧೀನ ಕಾರ್ಯದರ್ಶಿ-2
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

**ಇವರಿಗೆ:-**

1. ಮಹಾಲೇಖಪಾಲರು, (ಎ ಮತ್ತು ಇ) (ಲೆಕ್ಕ ಪರಿಶೋಧನೆ-1) (ಲೆಕ್ಕಪರಿಶೋಧನೆ-2), ಬೆಂಗಳೂರು
2. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
3. ಎಲ್ಲಾ ಜಿಲ್ಲಾಧಿಕಾರಿಗಳು- (ಆಯುಕ್ತರು, ಹಿಂ.ವ.ಕ.ಇ ಇವರ ಮುಖಾಂತರ)
4. ಎಲ್ಲಾ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳಿಗೆ (ಆಯುಕ್ತರು, ಹಿಂ.ವ.ಕ.ಇ ಇವರ ಮುಖಾಂತರ)
5. ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
6. ಮಾನ್ಯ ಪ್ರಧಾನ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ವಿಕಾಸ ಸೌಧ.
7. ಸರ್ಕಾರದ ಉಪ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರ ಆಪ್ತ ಸಹಾಯಕರು, ವಿಕಾಸ ಸೌಧ.
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

-----